# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿವಿಧ ಜಿಲ್ಲಾ/ತಾಲ್ಲೂಕು ಪಂಚಾಯತಿಗಳ ಮತ್ತು ಅವುಗಳ ವ್ಯಾಪ್ತಿಯ ಕೃಷಿ, ಶಿಕ್ಷಣ, ಯುವಜನ ಸೇವೆ ಮತ್ತು ಕ್ರೀಡಾ ಹಾಗೂ ಸಮಾಜ ಕಲ್ಯಾಣ ಇಲಾಖೆಗಳಲ್ಲಿ ತೆರವಾಗಿದ್ದ ಹುದ್ದೆಗಳು ಭರ್ತಿಯಾದ್ದರಿಂದ ವೇತನ/ಬಾಕಿ ವೇತನ ವೆಚ್ಚಕ್ಕಾಗಿ ಕೊರತೆಯಾಗಿರುವ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳ ಪತ್ರಗಳು

**ಪ್ರಸ್ತಾವನೆ:**

ರಾಜ್ಯದ ವಿವಿಧ ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತಿಗಳ ಹಾಗೂ ಅವುಗಳ ವ್ಯಾಪ್ತಿಯ ಕೃಷಿ, ಶಿಕ್ಷಣ, ಯುವಜನ ಸೇವೆ ಮತ್ತು ಕ್ರೀಡಾ ಹಾಗೂ ಸಮಾಜ ಕಲ್ಯಾಣ ಇಲಾಖೆಗಳಲ್ಲಿ ತೆರವಾದ ಹುದ್ದೆಗಳು ಭರ್ತಿಯಾದ್ದರಿಂದ ಬಾಕಿ ವೇತನ/ಪ್ರಸಕ್ತ ಸಾಲಿನ ವೇತನವನ್ನು ಸೆಳೆಯಲು ಪ್ರಧಾನ ಲೆಕ್ಕ ಶೀರ್ಷಿಕೆ 2202, 2205, 2225, 2435 ಮತ್ತು 2515ರಡಿ ಒಟ್ಟು ರೂ.259.54ಲಕ್ಷಗಳನ್ನು ಹೆಚ್ಚುವರಿಯಾಗಿ ಒದಗಿಸಿ ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ.68.73ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-196-1-05-300 ರಡಿ ಮತ್ತು ತಾಲ್ಲೂಕು ಪಂಚಾಯತ್ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ.190.81ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 391 ವೆಚ್ಚ 6/2020(ಇ) ದಿನಾಂಕ: 21ನೇ ಅಕ್ಟೋಬರ್ 2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ/ತಾಲ್ಲೂಕು ಪಂಚಾಯತಿಗಳಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ/ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4 ಮತ್ತು 5ರ ಲೆಕ್ಕ ಶೀರ್ಷಿಕೆಯಡಿ ಕಾಲಂ 6ರ ಒಟ್ಟು ರೂ.259.54ಲಕ್ಷ (ರೂಪಾಯಿ ಎರಡು ನೂರ ಐವತ್ತೊಂಬತ್ತು ಲಕ್ಷದ ಐವತ್ನಾಲ್ಕು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು, ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

[ರೂ. ಲಕ್ಷಗಳಲ್ಲಿ)

| ಕ್ರಮ ಸಂಖ್ಯೆ | ಜಿಲ್ಲಾ/ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-196-1-05-300ರಡಿ ಬಿಡುಗಡೆಗೊಳಿಸಿದ ಅನುದಾನ | ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಿದ ಅನುದಾನ | ಒಟ್ಟು |
|---|---|---|---|---|---|
| 1 | 2 | 3 | 4 | 5 | 6 |
| 1 | ಬಾಗಲಕೋಟೆ | 2225-00-101-0-30-005<br>2225-00-101-0-29-005<br>2225-00-101-0-38-005 | 3.49<br>27.76<br>7.48 | | 38.73 |
| 2 | ತುಮಕೂರು | 2435-00-101-0-26-005 | 19.28 | | 19.28 |
| 3 | ಕೊಪ್ಪಳ | 2515-00-101-0-28-005 | 1.85 | | 1.85 |
| 4 | ಉತ್ತರ ಕನ್ನಡ | 2202-00-103-0-36-005 | 3.18 | | 3.18 |
| 5 | ಮಂಡ್ಯ | 2205-00-104-0-27-005 | 5.69 | | 5.69 |
| 6 | ಯಲಹಂಕ | 2515-00-102-0-61-005 | | 19.54 | 19.54 |
| 7 | ಬಾಗಲಕೋಟೆ | 2515-00-102-0-61-251 | | 4.51 | 4.51 |
| 8 | ಜಮಖಂಡಿ | 2435-00-101-0-61-005<br>2225-00-101-0-61-005 | 171.27<br>1415193745<br>21.10.20 | 19.33<br>27.15 | 46.48 |
| 9 | ಹುನಗುಂದ | 2225-00-101-0-61-005 | | 6.33 | 6.33 |
| 10 | ತಿಪಟೂರು | 2515-00-102-0-61-005 | | 3.48 | 3.48 |
| 11 | ಚಿಕ್ಕೋಡಿ | 2515-00-102-0-61-005 | | 102.44 | 102.44 |
| 12 | ಸಿಂಧಗಿ | 2515-00-102-0-61-005 | | 8.03 | 8.03 |
| | ಒಟ್ಟು | 21.x.20 1415193694 → | 68.73 | 190.81 | |

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

ಈ ರೀತಿ ಬಿಡುಗಡೆಗೊಳಿಸಿದ ಅನುದಾನದಲ್ಲಿ ಕಾಲಂ 2ರಡಿ ಕಾರ್ಯಕ್ರಮದ ಲೆಕ್ಕ ಶೀರ್ಷಿಕೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಯವರುಗಳ ಬಾಕಿ ವೇತನ ವೆಚ್ಚವನ್ನು ಸೆಳೆಯಲು ಖಜಾನೆ-2ರಲ್ಲಿ ಲಭ್ಯಪಡಿಸುವಂತೆ ಹೆಚ್.ಆರ್.ಎಂ.ಎಸ್.ಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾಅಪ/ಸಮಾಜ ಕಲ್ಯಾಣ/ಕೃಷಿ/ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ
4. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಸಂಬಂಧಿಸಿದ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
7. ಸಂಬಂಧಿಸಿದ ಜಿಲ್ಲಾ/ಉಪ ಖಜಾನಾಧಿಕಾರಿಗಳು 8.ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ